Akashvani : Bangalore
Regional Bulletin In Kannada
07.04.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ವಿಧಾನಸಭಾ ಉಪಚುನಾವಣೆ; ಬಹಿರಂಗ ಪ್ರಚಾರಕ್ಕೆ ವಿದ್ಯುಕ್ತ ತೆರೆ; ಅಭ್ಯರ್ಥಿಗಳಿಂದ ಮನೆ ಮನೆ ಪ್ರಚಾರ
- ಹತ್ತರಿಂದ ೧೮ ವರ್ಷ ವಯಸ್ಸಿನ ಹುಡುಗಿಯರ ಗರ್ಭಧಾರಣೆಯ ಲೆಕ್ಕಪರಿಶೋಧನೆ ಕಡ್ಡಾಯಗೊಳಿಸಿ ಆರೋಗ್ಯ ಇಲಾಖೆ ಆದೇಶ
- ಕೊರತೆ ಇರುವ ಮುದ್ರಾಂಕ ಶುಲ್ಕಕ್ಕೆ ಪಾವತಿಸಬೇಕಾದ ದಂಡವನ್ನು ಹೈಕೋರ್ಟ್ ಮನ್ನಾ ಮಾಡಲು ಸಾಧ್ಯವಿಲ್ಲ - ಸುಪ್ರೀಂಕೋರ್ಟ್ ತೀರ್ಪು
- ಸಂಸ್ಕೃತವು ಒಂದು ಭಾಷೆಯಲ್ಲ, ಅದು ಭಾರತದ ಆತ್ಮ - ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ
- ಬೆಂಗಳೂರಿನ ಜನರು ನೀರಿನ ಬಿಲ್ ಪಾವತಿಸಲು ಒಟಿಎಸ್ ಅವಕಾಶ ಸದುಪಯೋಗಪಡಿಸಿಕೊಳ್ಳುವಂತೆ ಬಿ.ಡಬ್ಲ್ಯು.ಎಸ್.ಎಸ್.ಬಿ ಮನವಿ

***************

ದಾವಣಗೆರೆ ದಕ್ಷಿಣ, ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯ ಬಹಿರಂಗ ಪ್ರಚಾರ ಅಂತ್ಯಗೊಂಡಿದೆ. ನಾಳೆ ಅಭ್ಯರ್ಥಿಗಳು ಮನೆಮನೆಗೆ ತೆರಳಿ ಮತಯಾಚಿಸಲಿದ್ದಾರೆ. ಇದೇ ೯ ರಂದು ಮತದಾನ ನಡೆಯಲಿದೆ. ಮೇ ೪ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.

ದಾವಣಗೆರೆಯಲ್ಲಿ ೨೮೪ ಮತಗಟ್ಟೆಗಳಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ ೨೩೪ ಮತಗಟ್ಟೆಗಳಿವೆ. ಉಳಿದ ೫೦ ಮತಗಟ್ಟೆಗಳು ಗ್ರಾಮೀಣ ಪ್ರದೇಶಗಳಲ್ಲಿವೆ. ೭೬ ಮತಗಟ್ಟೆಗಳನ್ನು ಅತಿ ಸೂಕ್ಷ್ಮ ಎಂದು ಗುರುತಿಸಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ.

ಕ್ಷೇತ್ರ ವ್ಯಾಪ್ತಿಯಲ್ಲಿ ೨ ಲಕ್ಷದ ೩೧ ಸಾವಿರ ಮತದಾರರಿದ್ದಾರೆ. ಬೆಳಗ್ಗೆ ೭ ರಿಂದ ಸಂಜೆ ೬ ಗಂಟೆಯವರಿಗೆ ಮತದಾನಕ್ಕೆ ಅವಕಾಶವಿದೆ. ಮತಗಟ್ಟೆಯ ೨೦೦ ಮೀಟರ್ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆ ಸೇರಿದಂತೆ ಒಂದು ಸಾವಿರ ಪೊಲೀಸರನ್ನು ನಿಯೋಜಿಸಲಾಗಿದೆ.

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಉಪಚುನಾವಣೆಗೆ ಒಟ್ಟು ೩೨೨ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಪ್ರತಿಯೊಂದು ಮತಗಟ್ಟೆಗೆ ಪ್ರಿಸೈಡಿಂಗ್ ಅಧಿಕಾರಿ ಸೇರಿದಂತೆ ಸಿಬ್ಬಂದಿ ನೇಮಕ ಮಾಡಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮತದಾರರು ಯಾವುದೇ ಪ್ರಭಾವಕ್ಕೆ ಒಳಗಾಗದೇ, ಸ್ವತಂತ್ರವಾಗಿ ತಮ್ಮ ಮತದಾನ ಹಕ್ಕನ್ನು ಚಲಾಯಿಸುವಂತೆ ಮನವಿ ಮಾಡಿದ್ದಾರೆ.

***************

ಬಾಗಲಕೋಟೆಯಲ್ಲಿ ಪ್ರಚಾರದ ಕೊನೆಯ ಹಂತವಾಗಿ ಅಭ್ಯರ್ಥಿಗಳು ಇಂದು ಮನೆ ಮನೆಗೆ ಭೇಟಿ ನೀಡಿ ಮತಯಾಚಿಸುತ್ತಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಉಮೇಶ್‌ಮೇಟಿ ಹಾಗೂ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ತಮ್ಮ ಬೆಂಬಲಿಗರೊಂದಿಗೆ ಮನೆ ಮನೆಗೆ ತೆರಳಿ ಮತಯಾಚಿಸಿದರು.

ಬಿಜೆಪಿ ಅಭ್ಯರ್ಥಿ ಪರ ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಮುರುಗೇಶ ನಿರಾಣಿ, ವಿಧಾನಪರಿಷತ್ ಸದಸ್ಯ ನಾರಾಯಣ ಬಾಂಢಗೆ ಸೇರಿದಂತೆ ಹಲವು ನಾಯಕರು ಮನೆ ಮನೆಗೆ ಭೇಟಿ ನೀಡಿ ಮತಯಾಚಿಸಿದರು.

ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಉಮೇಶ್‌ಮೇಟಿ ಪರ ಸಚಿವ ಆರ್. ಬಿ. ತಿಮ್ಮಾಪುರ, ಮಾಜಿ ಸಚಿವ ಎಸ್.ಆರ್.ಪಾಟೀಲ್, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ವೀಣಾ ಕಾಶಪ್ಪನವರ ಸೇರಿದಂತೆ ಇತರ ಮುಖಂಡರು ಮನೆ ಮನೆಗೆ ತೆರಳಿ ಮತಯಾಚನೆ ನಡೆಸಿದರು.

***************

ರಾಜ್ಯದ ಎರಡೂ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಖಚಿತ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ತೈಲ ಹಾಗೂ ಗ್ಯಾಸ್ ಪೂರೈಕೆಯಲ್ಲಿ ರಾಜ್ಯಕ್ಕೆ ತಾರತಮ್ಯ ಎಸಗುತ್ತಿದೆ ಎಂದು ದೂರಿದ್ದಾರೆ.

೨೦೨೮ ರವರೆಗೂ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರುತ್ತಾರೆ ಎಂಬ ಸಚಿವ ಜಮೀರ ಅಹಮ್ಮದ್ ಹೇಳಿಕೆಗೆ ಪ್ರತಿಕ್ರಿಯಿಸಿ ಬೇರೆಯವರ ಹೇಳಿಕೆಗೆ ಪ್ರತಿಕ್ರಿಯಿಸುವುದಿಲ್ಲ ಎಂದು ತಿಳಿಸಿದ್ದಾರೆ.

***************

ರಾಜ್ಯದಲ್ಲಿ ಹತ್ತರಿಂದ ೧೮ ವರ್ಷ ವಯಸ್ಸಿನ ಹುಡುಗಿಯರ ಗರ್ಭಧಾರಣೆಯ ಲೆಕ್ಕ ಪರಿಶೋಧನೆಯನ್ನು ಕಡ್ಡಾಯಗೊಳಿಸಿ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನ ಕಾರ್ಯದರ್ಶಿ ಪ್ರದೀಪ್ ಕುಮಾರ್.ಬಿ.ಎಸ್ ಹೊರಡಿಸಿದ ಆದೇಶವು ತಕ್ಷಣದಿಂದ ಜಾರಿಗೆ ಬರಲಿದೆ.

ಆದೇಶದ ಪ್ರಕಾರ ತಾಯಿಯ ಆರೋಗ್ಯ ಅಪಾಯಗಳು, ಪ್ರತಿಕೂಲ ಹೆರಿಗೆ ಫಲಿತಾಂಶಗಳು, ಶಾಲೆ ಬಿಡುವುದು ಮತ್ತು ಸಾಮಾಜಿಕ ದುರ್ಬಲತೆಯನ್ನು ಗಮನದಲ್ಲಿಟ್ಟುಕೊಂಡು ಹದಿಹರೆಯದ ಗರ್ಭಧಾರಣೆಯನ್ನು ಗಂಭೀರ ಸಾರ್ವಜನಿಕ ಆರೋಗ್ಯ ಮತ್ತು ಸಾಮಾಜಿಕ ಕಾಳಜಿಯಾಗಿ ಪರಿಗಣಿಸಲು ಇಲಾಖೆ ನಿರ್ಧರಿಸಿದೆ.

ಎಲ್ಲಾ ಹದಿಹರೆಯದವರ ಗರ್ಭಧಾರಣೆಯನ್ನು ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ವರದಿ ಮಾಡಬೇಕು. ಪ್ರತಿಯೊಂದು ಪ್ರಕರಣದ ಲೆಕ್ಕ ಪರಿಶೋಧನೆ ನಡೆಸುವ ಜವಾಬ್ದಾರಿಯನ್ನು ತಾಲೂಕು ಅರೋಗ್ಯ ಅಧಿಕಾರಿಗಳಿಗೆ ನೀಡಲಾಗಿದೆ.

ತಾಲೂಕುಮಟ್ಟದಲ್ಲಿ ಆರೋಗ್ಯ ಅಧಿಕಾರಿಯ ಅಧ್ಯಕ್ಷತೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾದೀಕಾರಿ, ಆರೋಗ್ಯ ನಿರೀಕ್ಷಕರು, ಆಶಾ ಮತ್ತು ಅಂಗನವಾಡಿ ಮೇಲ್ವಿಚಾರಕರು ಸೇರಿದಂತೆ ಸದಸ್ಯರನ್ನು ಹೊಂದಿರುವ ಲೆಕ್ಕಪರಿಶೋಧಕ ಸಮಿತಿ ರಚಿಸಲು ನಿರ್ಧರಿಸಲಾಗಿದೆ.

***************

ಕೊರತೆ ಇರುವ ಮುದ್ರಾಂಕ ಶುಲ್ಕಕ್ಕೆ ಪಾವತಿಸಬೇಕಾದ ಶಾಸನಬದ್ಧ ದಂಡವನ್ನು ಹೈಕೋರ್ಟ್ ಮನ್ನಾ ಮಾಡಲು ಸಾಧ್ಯವಿಲ್ಲ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ.

ಅಂತಹ ಅಧಿಕಾರವು ಸಂಬಂಧಿತ ಸ್ಟ್ಯಾಂಪ್ ಕಾಯ್ದೆಯಡಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಮಾತ್ರ ಇರುತ್ತದೆ ಎಂದು ತಿಳಿಸಿದೆ.

ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿನೋದ್ ಚಂದ್ರನ್ ಅವರ ಪೀಠವು ರಾಜ್ಯ ಉಚ್ಚ ನ್ಯಾಯಾಲಯ ನೀಡಿದ ಆದೇಶವನ್ನು ರದ್ದುಗೊಳಿಸಿದೆ.

ಈ ತೀರ್ಪು, ಗುತ್ತಿಗೆ ದಾಖಲೆಗಳ ಮೇಲೆ ಕೊರತೆ ಇರುವ ಮುದ್ರಾಂಕ ಶುಲ್ಕವನ್ನು ಪಾವತಿಸುವಂತೆ ನಿರ್ದೇಶಿಸುವಾಗ ದಂಡದ ಪಾವತಿಯಿಂದ ವಿನಾಯಿತಿ ನೀಡಿದೆ.

***************

ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಸಮಾಜ ಮತ್ತು ರಾಷ್ಟ್ರದ ಕಲ್ಯಾಣಕ್ಕಾಗಿ ಬಳಸಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ೧೨ನೇ ಮತ್ತು ೧೩ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, “ಸಂಸ್ಕೃತವು ಕೇವಲ ಒಂದು ಭಾಷೆಯಲ್ಲ, ಅದು ಭಾರತದ ಆತ್ಮವಾಗಿದೆ ಎಂದು ತಿಳಿಸಿದ್ದಾರೆ.

“ಸ್ವಾವಲಂಬಿ ಭಾರತ ಮತ್ತು ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದ್ದಾರೆ.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಾಧನೆಗಳನ್ನು ಶ್ಲಾಘಿಸಿದ ರಾಜ್ಯಪಾಲರು, ಸಂಸ್ಕೃತ ಅಧ್ಯಯನ, ಸಂಶೋಧನೆ ಮತ್ತು ಅಂತರರಾಷ್ಟ್ರೀಯ ಸಹಯೋಗದಲ್ಲಿ ಈ ವಿಶ್ವವಿದ್ಯಾಲಯ ಇನ್ನಷ್ಟು ಉತ್ತುಂಗಕ್ಕೆ ಏರಲಿ ಎಂದು ಹಾರೈಸಿದ್ದಾರೆ.

***************

ಬೆಂಗಳೂರು ನೀರು ಸರಬರಾಜು ಒಳಚರಂಡಿ ಮಂಡಳಿ ನಗರದ ನಿವಾಸಿಗಳಿಗೆ ಮೂರು ತಿಂಗಳ ಅವಧಿಗೆ ಒನ್ ಟೈಮ್ ಸೆಟಲ್‌ಮೆಂಟ್- ಒಟಿಎಸ್ ಜಾರಿಗೆ ತಂದಿದೆ.

ಏಪ್ರಿಲ್‌ನಿಂದ ಜೂನ್‌ವರೆಗೆ ಯೋಜನೆ ಲಭ್ಯವಿದ್ದು, ಗ್ರಾಹಕರು ಈ ಅವಕಾಶ ಬಳಸಿಕೊಳ್ಳುವಂತೆ ಮನವಿ ಮಾಡಿದೆ.

ಬಿಡಬ್ಲ್ಯುಎಸ್‌ಎಸ್‌ಬಿ ವ್ಯಾಪ್ತಿಯ ಸುಮಾರು ೧೧ ಲಕ್ಷ ನೀರಿನ ಸಂಪರ್ಕಗಳಲ್ಲಿ ಐದು ಲಕ್ಷದ ೧೧ ಸಾವಿರ ಗ್ರಾಹಕರಿಗೆ ಸಂಬಂಧಿಸಿದ ಬಿಲ್‌ಗಳು ಬಾಕಿ ಇರುವುದಾಗಿ ಮಂಡಳಿಯ ಅಧ್ಯಕ್ಷ ರಾಮ್‌ಪ್ರಸಾದ್ ಮನೋಹರ್ ತಿಳಿಸಿದ್ದಾರೆ.

ಗ್ರಾಹಕರು ಈ ಅವಕಾಶ ಸದುಪಯೋಗಪಡಿಸಿಕೊಳ್ಳುವಂತೆ ಸಾಮಾಜಿಕ ಜಾಲತಾಣದಲ್ಲಿ ಮಂಡಳಿ ಮನವಿ ಮಾಡಿದೆ.

***************

ಕೇಂದ್ರ ಸರ್ಕಾರ ನಾರಿ ಶಕ್ತಿ ವಂದನಾ ಅಭಿಯಾನ ಕಾಯ್ದೆ ಕ್ರಾಂತಿಕಾರಕ ತೀರ್ಮಾನವಾಗಿದೆ ಎಂದು ಚಾಮರಾಜನಗರದ ಗೃಹಿಣಿ ಸುಜಾತಾ ಕಲ್ಲೇಶ್ ತಿಳಿಸಿದ್ದಾರೆ.

ಆಕಾಶವಾಣಿ ಜೊತೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತದಡಿ ಈಗ ಮಹಿಳಾ ಸಬಲೀಕರಣಕ್ಕೆ ದೊಡ್ಡ ಹೆಜ್ಜೆ ಇಟ್ಟಿದ್ದು ನಾರಿಶಕ್ತಿ ವಂದನಾ ಕಾಯ್ದೆಯು ಮುಂಬರುವ ದಿನಗಳಲ್ಲಿ ಕ್ರಾಂತಿ ತರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಗೃಹಿಣಿ ಸುಜಾತಾ ಕಲ್ಲೇಶ್

***************

ಮಂಡ್ಯ ಜಿಲ್ಲೆಯಲ್ಲಿ ಕೃಷಿ ವಿಶ್ವ ವಿದ್ಯಾಲಯ ಸ್ಥಾಪಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಯುವ ರೈತರು ಆರ್ಥಿಕವಾಗಿ ಸದೃಢವಾಗಲು ಶಕ್ತಿ ತುಂಬುವ ಕೆಲಸ ಮಾಡುವುದಾಗಿ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ತಾಲ್ಲೂಕಿನ ತೂಬಿನಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುತ್ತಮುತ್ತಲಿನ ಗ್ರಾಮಗಳಿಗೆ ಲೋಕಪಾವನಿ ನದಿಯಿಂದ ಕೆರೆಕಟ್ಟೆಗಳಿಗೆ ನೀರು ತುಂಬಿಸುವ ಮಹತ್ವದ ಕೆಲಸಕ್ಕೆ ನಾಂದಿ ಹಾಡಿದ ಕೀರ್ತಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದ್ದಾರೆ.

ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ಮುಖ್ಯಮಂತ್ರಿಯಾಗಿ ರಾಜ್ಯದಲ್ಲಿ ಎಲ್ಲಾ ಭಾಗಗಳಲ್ಲೂ ಅಭಿವೃದ್ಧಿ ಕೆಲಸ ಮಾಡುವುದು ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ತಮ್ಮ ಜವಾಬ್ದಾರಿ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಇನ್ನು ಸಂಕ್ಷಿಪ್ತ ಸುದ್ದಿಗಳು...

- ಬೇಸಿಗೆ ಇರುವುದರಿಂದ ವಿಜಯಪುರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ. ಅಧಿಕಾರಿಗಳಿಗೆ ಸೂಚಿಸಿದ್ದಾರೆ.
- ವೀರಶೈವ ಸಂಘಟನೆಯನ್ನು ಸಚಿವ ಈಶ್ವರ್ ಬಿ ಖಂಡ್ರೆ ದುರಪಯೋಗಪಡಿಸುತ್ತಿದ್ದಾರೆ ಎಂದು ಬಿಜೆಪಿ ಶಾಸಕ ಬಿ.ಬಿ.ಹರೀಶ್ ಆರೋಪಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಡವೀರಶೈವರಿಗೆ ಈ ಸಂಘಟನೆ ಯಾವುದೇ ಕೊಡುಗೆ ನೀಡಿಲ್ಲ ಎಂದು ತಿಳಿಸಿದ್ದಾರೆ.
- ಇದೇ ೧೬ ರಿಂದ ಭಾರತ ದೇಶದಾದ್ಯಂತ ಮನೆಮನೆ ಜನಗಣತಿ ಕಾರ್ಯ ಆರಂಭವಾಗಲಿದೆ. ಅದರಂತೆ ಜಿಲ್ಲೆಯಲ್ಲಿಯೂ ಇದೇ ೧೬ ರಿಂದ ಮೇ ೧೬ ರವರೆಗೆ

ಮನೆಮನೆ ಜನಗಣತಿ ಕಾರ್ಯ ನಡೆಯಲಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ.

******ಮುಕ್ತಾಯ********